876(1030) ಶ್ರೀ ಹಾಲಪ್ಪ ಹೆಚ್ (ಹೊಸನಗರ) ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿವಮೊಗ್ಗ ಜಿಲ್ಲೆಯಲ್ಲಿ ಪ್ರಸಕ್ತ ವರ್ಷ ಮಂಜೂರಾದ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು, (ತಾಲ್ಲೂಕುವಾರು ಮಾಹಿತಿ ನೀಡುವುದು),

ಆ) ಇದುವರೆವಿಗೂ ಆಯ್ಕೆ ಮಾಡಲಾದ ಅಂಗನವಾಡಿ ಕಾರ್ಯಕರ್ತೆಯರ ಸಂಖ್ಯೆ ಎಷ್ಟು,

ಇ) ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು, (ತಾಲ್ಲೂಕುವಾರು, ಕೇಂದ್ರವಾರು ಮಾಹಿತಿ ನೀಡುವುದು),

ಈ) ಉಳಿದ ಅಂಗನವಾಡಿ ಕಾರ್ಯಕರ್ತೆಯರನ್ನು ಭರ್ತಿ ಮಾಡದಿರಲು ಕಾರಣಗಳೇನು,

ಉ) ಹಾಗಿದ್ದಲ್ಲಿ, ಯಾವಾಗ ಭರ್ತಿ ಮಾಡಲಾಗುವುದು?

ಶ್ರೀ ಹೆಚ್ ಕೆ ಕುಮಾರಸ್ವಾಮಿ (ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು)

ಅ) ಶಿವಮೊಗ್ಗ ಜಿಲ್ಲೆಯಲ್ಲಿ ಪ್ರಸಕ್ತ ವರ್ಷ ಮಂಜೂರಾದ ಅಂಗನವಾಡಿ ಕೇಂದ್ರಗಳ ಸಂಖ್ಯೆ 559

ತಾಲ್ಲೂಕುವಾರು ಮಾಹಿತಿ ಅನುಬಂಧದಲ್ಲಿ ಲಗತ್ತಿಸಿದೆ

ಆ) 434 ಅಂಗನವಾಡಿ ಕಾರ್ಯಕರ್ತೆಯರನ್ನು ಆಯ್ಕೆ ಮಾಡಲಾಗಿರುತ್ತದೆ

ಇ) ಅಂಗನವಾಡಿ ಕಾರ್ಯಕರ್ತೆಯರ 125 ಹುದ್ದೆಗಳು ಖಾಲಿ ಇರುತ್ತದೆ ತಾಲ್ಲೂಕುವಾರು, ಕೇಂದ್ರವಾರು ಮಾಹಿತಿ ಅನುಬಂಧದಲ್ಲಿ ಲಗತ್ತಿಸಿದೆ

ಈ) ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು ದಿನಾಂಕ 21-8-2006, 29-9-2006 ಮತ್ತು 11-10-2006ರ ಮಧ್ಯಂತರ ಆದೇಶಗಳಲ್ಲಿ ಅಂಗನವಾಡಿ ಕಾರ್ಯಕರ್ತೆಯರ ಆಯ್ಕೆ ಸಮಿತಿ ಪುನರ್ ರಚಿಸಿರುವ ಸರ್ಕಾರದ ಆದೇಶ ಸಂ ಮಮಇ 199 ಐಸಿಡಿ 2006, ದಿನಾಂಕ 15-7-2006, 21-7-2006 ಮತ್ತು 7-9-2006ಗಳನ್ನು ಅನುಷ್ಠಾನಗೊಳಿಸದಂತೆ ಮತ್ತು ಮುಂದಿನ ಕ್ರಮಗಳನ್ನು ಕೈಗೊಳ್ಳದಿರುವಂತೆ ತಡೆಯಾಜ್ಞೆ ನೀಡಿರುವುದರಿಂದ ನೇಮಕಾತಿ ಆದೇಶಗಳನ್ನು ಹೊರಡಿಸಿರುವುದಿಲ್ಲ

ಉ) ನ್ಯಾಯಾಲಯ ಪ್ರಕರಣ ಇತ್ಯರ್ಥವಾದ ನಂತರ ಉಳಿದ ಹುದ್ದೆಗಳನ್ನು ಭರ್ತಿ ಮಾಡಲಾಗುವುದು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂ 1030ರ ಅನುಬಂಧ

ಅನುಬಂಧ–1

ಕ್ರ ಸಂ	ತಾಲ್ಲೂಕಿನ ಹೆಸರು	ಪ್ರಸಕ್ತ ವರ್ಷ ಮಂಜೂರಾದ ಅಂಗನವಾಡಿ ಕೇಂದ್ರಗಳು	ಆಯ್ಕೆ ಮಾಡಲಾದ ಅಂಗನವಾಡಿ ಕಾರ್ಯಕರ್ತೆಯರ ಸಂಖ್ಯೆ	ಖಾಲಿ ಹುದ್ದೆಗಳ ಸಂಖ್ಯೆ
1	ಶಿವಮೊಗ್ಗ	90	36	54
2	ಭದ್ರಾವತಿ	44	39	05
3	ಸಾಗರ	82	68	14
4	ಸೊರಬ	99	79	20
5	ಶಿಕಾರಿಮರ	91	82	9
6	ಹೊಸನಗರ	67	57	10
7	ತೀರ್ಥಹಳ್ಳಿ	86	73	13
		559	**434**	**125**

877(1031) ಶ್ರೀ ಹಾಲಪ್ಪ ಹೆಚ್ (ಹೊಸನಗರ) ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹೊಸನಗರ ತಾಲ್ಲೂಕು, ನಗರದಲ್ಲಿರುವ ಬಿದನೂರು ಕೋಟೆಯನ್ನು ಅಭಿವೃದ್ಧಿಪಡಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ,

ಆ) ಹಾಗಿದ್ದಲ್ಲಿ, ಈ ಕೋಟೆಯನ್ನು ಅಭಿವೃದ್ಧಿಪಡಿಸಲು ಸರ್ಕಾರ ಕೈಗೊಂಡ ಕ್ರಮವೇನು?

ಶ್ರೀ ಹೆಚ್ ಎಸ್ ಮಹದೇವ ಪ್ರಸಾದ್ (ಕನ್ನಡ ಮತ್ತು ಸಂಸ್ಕೃತಿ ಸಚಿವರು)

ಅ) ಐತಿಹಾಸಿಕ ಬಿದನೂರು ಕೋಟೆಯು ಕೇಂದ್ರ ಪುರಾತತ್ವ ಇಲಾಖೆಯ ಸಂರಕ್ಷಣಾ ವ್ಯಾಪ್ತಿಯಲ್ಲಿದ್ದು ಈ ಕೋಟೆಯ ಸಂರಕ್ಷಣೆ ಮತ್ತು ಅಭಿವೃದ್ಧಿ ಕಾರ್ಯವನ್ನು ಕೇಂದ್ರ ಪುರಾತತ್ವ ಸರ್ವೇಕ್ಷಣವು ಕೈಗೊಳ್ಳುತ್ತಿದೆ

ಆ) ಕೇಂದ್ರ ಪುರಾತತ್ವ ಸರ್ವೇಕ್ಷಣವು ಒದಗಿಸಿರುವ ಮಾಹಿತಿಯ ಪ್ರಕಾರ ಬಿದನೂರಿನ ಐತಿಹಾಸಿಕ ಕೋಟೆಯನ್ನು ಸಂರಕ್ಷಿಸುವಲ್ಲಿ ಕ್ರಮವಹಿಸಿದ್ದು ಕೋಟೆಯ ಬಿದ್ದಿರುವ ಹಾಗೂ ಶಿಥಿಲಗೊಂಡಿರುವ ಕಂದಕಗಳು, ಒಳ ಭಾಗದ